**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

**DTE-ADMI0ACM2/20 /2025**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:17-04-2025

**-:: ಪ್ರವೇಶಾಧಿಸೂಚನೆ ::-**

2025-26ನೇ ಸಾಲಿಗೆ ಕೆಳಕಂಡ ಖಾಸಗಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿ 8ನೇ ತರಗತಿಯ ಪ್ರವೇಶಕ್ಕಾಗಿ ಪ್ರವೇಶಾಧಿಸೂಚನೆ ಹೊರಡಿಸಲಾಗಿದೆ.

1. ಶ್ರೀ.ವಿಶ್ವಕರ್ಮ ಎಜುಕೇಶನಲ್ & ಕಲ್ಚರಲ್ ಟ್ರಸ್ಟ್ ಶ್ರೀ.ಕಾಳಿಕಾಂಬ ಕಿರಿಯ ತಾಂತ್ರಿಕ ಶಾಲೆ, ಕಾರ್ಕಳ ತಾ|| ಉಡುಪಿ ಜಿಲ್ಲೆ.
2. ಬೆಳಗಾಂ ಇಂಟಿಗ್ರೇಟೆಡ್ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ಕಿರಿಯ ತಾಂತ್ರಿಕ ಶಾಲೆ, ತುಕ್ಕಾನಹಟ್ಟಿ, ಗೋಕಾಕ್ ತಾ||, ಬೆಳಗಾವಿ ಜಿಲ್ಲೆ.
3. **ಶ್ರೀ. ರೇವಣಸಿದ್ದೇಶ್ವರ ಸೊಸೈಟಿ ಡಾ: ಎಂ.ಪಿ.ನಾಡಗೌಡ ಕಿರಿಯ ತಾಂತ್ರಿಕ ಶಾಲೆ, ಘಟಪ್ರಭ, ಗೋಕಾಕ್ ತಾ||, ಬೆಳಗಾಂ ಜಿಲ್ಲೆ.**
4. ಪ್ರಗತಿ ಎಜುಕೇಶನ್ ಟ್ರಸ್ಟ್ ಕಿರಿಯ ತಾಂತ್ರಿಕ ಶಾಲೆ, ಕಂಪ್ಲಿ, ಬಳ್ಳಾರಿ ಜಿಲ್ಲೆ
5. ಶ್ರೀ. ದುರ್ಗಾಮಾತಾ ವಿದ್ಯಾಸಂಸ್ಥೆ ಕಿರಿಯ ತಾಂತ್ರಿಕ ಶಾಲೆ, ಹಿರೇಕೆರೂರು, ಹಾವೇರಿ ಜಿಲ್ಲೆ
6. ಕೆ. ಎಸ್. ಗೌಡ ಎಜುಕೇಷನ್ ಟ್ರಸ್ಟ್ ಕಿರಿಯ ತಾಂತ್ರಿಕ ಶಾಲೆ, ನಿಂತಿಕಲ್ಲು, ಸುಳ್ಯ, ದ.ಕ.ಜಿಲ್ಲೆ.
7. **ಶ್ರೀ ಸಾಯಿ ಪ್ರಗತಿ ಟೆಕ್ನೋ ಕಿರಿಯ ತಾಂತ್ರಿಕ ಶಾಲೆ, ಕಮಲಾಪುರ – 583 221, ಹೊಸಪೇಟೆ ತಾ||**

**ಸರ್ಕಾರಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳ ವೈಶಿಷ್ಟ್ಯಗಳು:-**

1. ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿನ ಪ್ರೌಢಶಾಲೆಗಳಲ್ಲಿ ಬೋಧಿಸಲಾಗುವ ವಿಷಯಗಳೊಂದಿಗೆ ಈ ಕೆಳಕಂಡ ಯಾವುದಾದರೂ ಒಂದು ಇಂಜಿನಿಯರಿಂಗ್ ತಾಂತ್ರಿಕ ವಿಷಯವನ್ನು ಹೆಚ್ಚುವರಿಯಾಗಿ ಅಧ್ಯಯನ ಮಾಡಬೇಕಾಗುತ್ತದೆ.
   1) ಎಲೆಕ್ಟ್ರಿಕಲ್ ಇಂಜಿನಿಯರಿಂಗ್
   2) ಮೆಕ್ಯಾನಿಕಲ್ ಇಂಜಿನಿಯರಿಂಗ್

2. ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಯಲ್ಲಿ ವ್ಯಾಸಂಗ ಮಾಡಿ ಎಸ್ಎಸ್ಎಲ್‌ಸಿಯಲ್ಲಿ ಉತ್ತೀರ್ಣ ಹೊಂದಿದ ಅಭ್ಯರ್ಥಿಗಳಿಗಾಗಿಯೇ ಡಿಪ್ಲೋಮಾ ವ್ಯಾಸಂಗಕ್ಕಾಗಿ ರಾಜ್ಯದ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕೆಲವು ಸ್ಥಾನಗಳನ್ನು ಕಾಯ್ದಿರಿಸಲಾಗಿದೆ.

3. ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಎಸ್.ಎಸ್.ಎಲ್.ಸಿ ಅಭ್ಯರ್ಥಿಗಳು ಪಿ.ಯು.ಸಿ ವ್ಯಾಸಂಗಕ್ಕೂ ಸಹ ಅರ್ಹರಾಗಿರುತ್ತಾರೆ.

4. ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿನ ಶಿಕ್ಷಣ ಮಾಧ್ಯಮ:- ಸಾಮಾನ್ಯ ವಿಷಯಗಳನ್ನು ಕನ್ನಡದಲ್ಲೂ ಹಾಗೂ ತಾಂತ್ರಿಕ ವಿಷಯಗಳನ್ನು ಇಂಗ್ಲೀಷ್‌ನಲ್ಲೂ ಬೋಧಿಸಲಾಗುವುದು.

5. **ಪ್ರವೇಶಕ್ಕಾಗಿ ಶಿಕ್ಷಣಾರ್ಹತೆ:-** ಅಭ್ಯರ್ಥಿಯು ಕರ್ನಾಟಕ ಸರ್ಕಾರದ/ಸಿಬಿಎಸ್‌ಇ/ಐಸಿಎಸ್‌ಇ ಮಾನ್ಯತೆ ಪಡೆದ ಶಿಕ್ಷಣ ಶಾಲೆಗಳಲ್ಲಿ 7ನೇ ತರಗತಿಯಲ್ಲಿ ಕನ್ನಡ ಮತ್ತು ಇಂಗ್ಲೀಷ್ ವಿಷಯಗಳೊಂದಿಗೆ, ಇಂಗ್ಲೀಷ್ ಅಥವಾ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರತಕ್ಕದ್ದು.

**6. ಪ್ರವೇಶಕ್ಕಾಗಿ ಇತರೆ ಅರ್ಹತೆಗಳು:-**

ಅ) ಭಾರತದ ಪ್ರಜೆಯಾಗಿರಬೇಕು.

ಆ) ಅರ್ಜಿ ಸ್ವೀಕರಿಸುವ ಹಿಂದಿನ ದಿನಾಂಕಕ್ಕೆ ಅಭ್ಯರ್ಥಿಯು ಕರ್ನಾಟಕದ ಯಾವುದೇ ಅಂಗೀಕೃತ ಶಾಲೆಯಲ್ಲಿ ಕನಿಷ್ಠ 5 ವರ್ಷಗಳ ವ್ಯಾಸಂಗ ಮಾಡಿರಬೇಕು.

**7. ಅರ್ಜಿ ಸಲ್ಲಿಸುವ ಬಗ್ಗೆ ಸೂಚನೆ:-** ಅರ್ಜಿ ನಮೂನೆಯನ್ನು **ದಿ: 21-04-2025 ರಿಂದ ದಿ: 15-05-2025ರವರೆಗೆ** ಆಯಾ ಖಾಸಗಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಯ ಪ್ರಿನ್ಸಿಪಾಲರಿಂದ ಪಡೆಯಬಹುದಾಗಿದೆ.

**8. ಪ್ರವೇಶ ಮುಗಿಸುವ ಅಂತಿಮ ದಿನಾಂಕ:-** ಪ್ರವೇಶ ನಿಯಮಗಳು ಮತ್ತು ಪ್ರಸ್ತುತ ಜಾರಿಯಲ್ಲಿರುವ ಮೀಸಲಾತಿ ನಿಯಮಗಳನ್ನು ಅನುಸರಿಸಿ ಅರ್ಹ ಅಭ್ಯರ್ಥಿಗಳಿಗೆ **ದಿನಾಂಕ:15-05-2025ರ** ಒಳಗೆ ಪ್ರವೇಶ ಮುಗಿಸತಕ್ಕದ್ದು.

**9. ಎಂಟನೇ ತರಗತಿಗಳ ಪ್ರಾರಂಭ:-** ಶೈಕ್ಷಣಿಕ ತರಗತಿಗಳನ್ನು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ರವರ 2025-26ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಯನ್ನು ಅನುಸರಿಸಿ ಅದರಂತೆ ಕ್ರಮವಹಿಸುವುದು.

Digitally signed by MANJUSHREE N
Date: 25-04-2025 15:54:05

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಮೇಲ್ಕಂಡ ಎಲ್ಲಾ ಖಾಸಗಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರಿಗೆ** - ಮೇಲ್ಕಂಡ ಅಧಿಸೂಚನೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ಅಭ್ಯರ್ಥಿಗಳಿಗೆ ವಿವರವಾದ ಮಾಹಿತಿಯನ್ನು ನೀಡುವುದು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಆಯುಕ್ತರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ-ಆಡಳಿತ ವಿಭಾಗಕ್ಕೆ – ಆಯುಕ್ತಾಲಯದ ವೆಬ್‌ಸೈಟ್‌ನಲ್ಲಿ ಸದರಿ ಅಧಿಸೂಚನೆಯನ್ನು ಪ್ರಚುರಪಡಿಸುವುದು.
7. ಡಿವಿಪಿ(2) ವಿಭಾಗಕ್ಕೆ – ಮಾಹಿತಿಗಾಗಿ
8. ಕಛೇರಿ ಪ್ರತಿ.